ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

10

ಇಲಾಖೆ / ವಿಷಯ : DEPARTMENT / SUBJECT: ತೋಟಗಾರಿಕೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 10/9/2020

# ಕಬ್ಬನ್ ಪಾರ್ಕ್‌ನಲ್ಲಿ ವಾಹನ ಸಂಚಾರ ಶುರು

■ **ವಿಕ ಸುದ್ದಿಲೋಕ** ಬೆಂಗಳೂರು 10/9

ಸರಕಾರದ ಆದೇಶದ ಮೇರೆಗೆ ಕಬ್ಬನ್ ಪಾರ್ಕ್‌ನಲ್ಲಿ ವಾಹನಗಳ ಸಂಚಾರವನ್ನು ಬುಧವಾರದಿಂದ ಆರಂಭಿಸಲಾಗಿದೆ.

ಜತೆಗೆ ಕಬ್ಬನ್ ಪಾರ್ಕ್‌ನಲ್ಲಿ ಈವರೆಗೆ ವಾಯುವಿಹಾರಿಗಳಿಗೆ ಮಾತ್ರ ಪ್ರವೇಶಾವಕಾಶವಿತ್ತು. ಇದೀಗ ಸಾರ್ವಜನಿಕರಿಗೂ ಪ್ರವೇಶಾವಕಾಶ ಕಲ್ಪಿಸಲಾಗಿದೆ ಎಂದು ರಾಜ್ಯ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಜೆ. ಗುಣವಂತ ತಿಳಿಸಿದರು.

ಲಾಕ್‌ಡೌನ್ ಹಿನ್ನೆಲೆಯಲ್ಲಿ ಕಳೆದ ನಾಲ್ಕು ತಿಂಗಳಿಂದ ಉದ್ಯಾನಕ್ಕೆ ಸಾರ್ವಜನಿಕರ ಪ್ರವೇಶ ಮತ್ತು ವಾಹನಗಳ ಸಂಚಾರ ನಿಷೇಧಿಸಲಾಗಿತ್ತು. ಇದೀಗ ಎಲ್ಲಾ ಚಟುವಟಿಕೆಗಳು ಆರಂಭವಾಗಿವೆ. ಜತೆಗೆ, ಮಂಗಳವಾರ ಸರಕಾರ ಕೂಡ ಉದ್ಯಾನಗಳಲ್ಲಿ ಈ ಮೊದಲಿನಂತೆ ವಾಹನ ಸಂಚಾರಕ್ಕೆ ರಸ್ತೆಗಳನ್ನು ಮುಕ್ತಗೊಳಿಸುವಂತೆ ಸುತ್ತೋಲೆ ಹೊರಡಿಸಿತ್ತು. ಅಲ್ಲದೆ ಸಚಿವಾಲಯ ಕ್ಲಬ್‌ನ ಗೌರವ ಕಾರ್ಯದರ್ಶಿ ಯು.ಡಿ. ನರಸಿಂಹಯ್ಯ ಅವರು ಕಬ್ಬನ್ ಪಾರ್ಕ್‌ನಲ್ಲಿ ವಾಹನ ಸಂಚಾರಕ್ಕೆ ಅವಕಾಶ ನೀಡದಿದ್ದರೆ ಪ್ರತಿಭಟನೆ ಮಾಡುವ ಎಚ್ಚರಿಕೆಯನ್ನೂ ನೀಡಿದ್ದರು. ಸಾರ್ವಜನಿಕರಿಗೂ ಉದ್ಯಾನ ವೀಕ್ಷಣೆಗೆ ಅವಕಾಶ ಮಾಡಿಕೊಡಲಾಗಿದೆ. ಆದರೆ, ಕಬ್ಬನ್ ಉದ್ಯಾನದಲ್ಲಿರುವ ಬಾಲಭವನ ಇನ್ನೂ ಮಕ್ಕಳ ಆಟಕ್ಕೆ ಮುಕ್ತಗೊಳಿಸಿಲ್ಲ.



## ನಿರ್ಬಂಧ ಮುಂದುವರಿಕೆ ಕೋರಿ ಪಿಐಎಲ್

ಕಬ್ಬನ್ ಪಾರ್ಕ್‌ನಲ್ಲಿ ವಾಹನಗಳ ಸಂಚಾರ ನಿರ್ಬಂಧ ಮುಂದುವರಿಸುವಂತೆ ಕೋರಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ. ಕಬ್ಬನ್ ಪಾರ್ಕ್ ನಡಿಗೆದಾರರ ಸಂಘದ ಎಸ್. ಉಮೇಶ್ ಮತ್ತಿತರರು ಪಿಐಎಲ್ ಸಲ್ಲಿಸಿದ್ದು, ಅದು ಇನ್ನೂ ನ್ಯಾಯಪೀಠದ ಮುಂದೆ ವಿಚಾರಣೆಗೆ ಬರಬೇಕಿದೆ. ವಾಹನ ಸಂಚಾರದಿಂದ ಪರಿಸರದ ಮೇಲೆ ಹಾನಿಯಾಗಲಿರುವುದರಿಂದ, ಪಾರ್ಕ್ ಒಳಗಿನ ಶುದ್ಧ ಪರಿಸರ ಕಾಪಾಡುವ ದೃಷ್ಟಿಯಿಂದ ನಿರ್ಬಂಧ ಮುಂದುವರಿಸಲು ಮನವಿ ಮಾಡಲಾಗಿದೆ.